## ಹಿಂಬರಹ

ಸಂಖ್ಯೆ: ಡಿಟಿಇ 01 ಇಎಸ್‌ಟಿ(9) 2017/2327 ದಿನಾಂಕ: 27-11-2017

ಕರ್ನಾಟಕ ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 5 ಸೇಸೇನಿ 2017 ಬೆಂಗಳೂರು ದಿನಾಂಕ:28.10.2017ರ ಪ್ರತಿಯನ್ನು ಮಾಹಿತಿಗಾಗಿ ಈ ಕೆಳಕಂಡವರಿಗೆ ಕಳುಹಿಸಿಕೊಡಲಾಗಿದೆ.

1. ಈ ಇಲಾಖೆಯ ಅಧೀನಕ್ಕೊಳಪಡುವ ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು, ಸರ್ಕಾರಿ ಪಾಲಿಟೆಕ್ನಿಕ್, ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳು, ಸ್ಟೆರಿಕ್ ಸಂಸ್ಥೆ, ಬೆಂಗಳೂರು, ಸರ್ಕಾರಿ ಗಣಿ ಶಿಕ್ಷಣ ಶಾಲೆ, ಕೆ.ಜಿ.ಎಫ್ ಸಂಸ್ಥೆಗಳ ಪ್ರಿನ್ಸಿಪಾಲರುಗಳಿಗೆ ಮಾಹಿತಿಗಾಗಿ [ಇಲಾಖಾ ವೆಬ್‌ಸೈಟ್ ಮುಖಾಂತರ]
2. ಈ ನಿರ್ದೇಶನಾಲಯದ ಎಲ್ಲಾ ಅಧಿಕಾರಿಗಳಿಗೆ, ಜಂಟಿ ನಿರ್ದೇಶಕರು(ಆಡಳಿತ), ಆಡಳಿತಾಧಿಕಾರಿ, ಸಹಾಯಕ ಆಡಳಿತಾಧಿಕಾರಿ (1), (2) ಹಾಗೂ (3), ಸಾರ್ವಜನಿಕ ಸಂಪರ್ಕಾಧಿಕಾರಿ ಹಾಗೂ ರಿಜಿಸ್ಟ್ರಾರ್ (ಆಡಳಿತ) ಮಾಹಿತಿಗಾಗಿ
3. ನಿರ್ದೇಶಕರ ಆಪ್ತ ಶಾಖೆಗೆ
4. ಈ ನಿರ್ದೇಶನಾಲಯದ ಇಎಸ್‌ಟಿ (1) ರಿಂದ (10) ವಿಭಾಗಕ್ಕೆ ಮಾಹಿತಿಗಾಗಿ
5. ಈ ನಿರ್ದೇಶನಾಲಯದ ಇ-ಆಡಳಿತ ವಿಭಾಗಕ್ಕೆ ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ

ಆಡಳಿತಾಧಿಕಾರಿ

Sh-est(9) Endsmnt

13983

ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 5 ಸೆಸೆನಿ 2017

ಕರ್ನಾಟಕ ಸರ್ಕಾರದ ಸಚಿವಾಲಯ
ವಿಧಾನಸೌಧ, ಬೆಂಗಳೂರು
ದಿನಾಂಕ: 28/10/2017

<u>ಅಧಿಕೃತ ಜ್ಞಾಪನ</u>

ವಿಷಯ : ವಾಹನ ಚಾಲಕ ವೃಂದದಿಂದ ಕಿರಿಯ ಸಹಾಯಕ ವೃಂದಕ್ಕೆ ವೃಂದ ಬದಲಾವಣೆ ಹೊಂದುವ ನೌಕರರು ತೇರ್ಗಡೆ ಹೊಂದಬೇಕಾದ ಇಲಾಖಾ ಪರೀಕ್ಷೆಗಳ ಕುರಿತು ಸ್ಪಷ್ಟೀಕರಣ

JD(Adl)/Rg(Adl)/E&F(2)

ಉಲ್ಲೇಖ : 1) ದಿನಾಂಕ: 19/08/1978ರ ಅಧಿಕೃತ ಜ್ಞಾಪನ ಸಂಖ್ಯೆ: ಡಿಪಿಎಆರ್ 44 ಎಸ್ಎಸ್ಆರ್ 78

2) ದಿನಾಂಕ: 21/06/1978ರ ಸರ್ಕಾರದ ಆದೇಶ ಸಂಖ್ಯೆ: ಡಿಪಿಎಆರ್ 9 ಎಸ್ಎಸ್ಆರ್ 78

24/11

*****

ಕರ್ನಾಟಕ ನಾಗರಿಕ ಸೇವಾ (ಸೇವಾ ಮತ್ತು ಕನ್ನಡ ಭಾಷಾ ಪರೀಕ್ಷೆಗಳು) ನಿಯಮಗಳು, 1974ರಲ್ಲಿನ ನಿಯಮಗಳು ಗ್ರೂಪ್-ಡಿ ನೌಕರರಿಗೆ ಅನ್ವಯವಾಗುವುದಿಲ್ಲ. ಈ ಕಾರಣಕ್ಕಾಗಿ ಉಲ್ಲೇಖ (1)ರ ದಿನಾಂಕ: 19/08/1978ರ ಅಧಿಕೃತ ಜ್ಞಾಪನದಲ್ಲಿ ಗ್ರೂಪ್-ಡಿ ನೌಕರರು ಕಿರಿಯ ಸಹಾಯಕ ಹುದ್ದೆಗೆ ಪದೋನ್ನತಿ ಹೊಂದಲು ಅರ್ಹರಿದ್ದಲ್ಲಿ ಅಂತಹ ನೌಕರರು ಕಿರಿಯ ಸಹಾಯಕರಾಗಿ ಪದೋನ್ನತಿ ಹೊಂದಿದ ಮೂರು ವರ್ಷಗಳೊಳಗಾಗಿ ಹುದ್ದೆಗೆ ನಿಗದಿಪಡಿಸಿದ ಇಲಾಖಾ ಪರೀಕ್ಷೆಗಳನ್ನು ತೇರ್ಗಡೆ ಹೊಂದಲು ಕಾಲಾವಕಾಶ ಕಲ್ಪಸಲಾಗಿದೆ.

ಉಲ್ಲೇಖ (2)ರ ದಿನಾಂಕ: 21/06/1978ರ ಸರ್ಕಾರದ ಆದೇಶ ಸಂಖ್ಯೆ: ಡಿಪಿಎಆರ್ 9 ಎಸ್ಎಸ್ಆರ್ 78ರಲ್ಲಿ ವಾಹನ ಚಾಲಕರಿಗೆ ಕನ್ನಡ ಭಾಷಾ ಪರೀಕ್ಷೆಯಲ್ಲಿ ತೇರ್ಗಡೆ ಹೊಂದುವುದರಿಂದ ವಿನಾಯಿತಿ ನೀಡಲಾಗಿರುತ್ತದೆ.

ವಾಹನ ಚಾಲಕ ಹುದ್ದೆಯು ಮೊದಲಿಗೆ ಗ್ರೂಪ್-ಡಿ ಹುದ್ದೆಯಾಗಿರುತ್ತದೆ. ವಾಹನ ಚಾಲಕ ಹುದ್ದೆಯು ತಾಂತ್ರಿಕ ಹುದ್ದೆಯಾದ ಕಾರಣ ವಾಹನ ಚಾಲಕ ಹುದ್ದೆಯನ್ನು ಗ್ರೂಪ್-ಡಿ ಯಿಂದ ಗ್ರೂಪ್-ಸಿ ವೃಂದಕ್ಕೆ ಉನ್ನತೀಕರಿಸಲಾಗಿದೆ. ವಾಹನ ಚಾಲಕ ಹುದ್ದೆಗೆ ಯಾವುದೇ ಇಲಾಖಾ ಪರೀಕ್ಷೆಗಳನ್ನು ನಿಗದಿಪಡಿಸಿರುವುದಿಲ್ಲ.

ಕರ್ನಾಟಕ ನಾಗರಿಕ ಸೇವಾ (ಆಪಿಕ ಹುದ್ದೆಗಳ ನೇಮಕಾತಿ) ನಿಯಮಗಳು, 1978ರ ನಿಯಮ 4ಎ(ಬಿ)ರನ್ವಯ ವಾಹನ ಚಾಲಕ ವೃಂದದಿಂದ ಕಿರಿಯ ಸಹಾಯಕ ವೃಂದಕ್ಕೆ ವರ್ಗಾವಣೆ ಹೊಂದಲು ದ್ವಿತೀಯ ವರ್ಷದ ಪದವಿ ಪೂರ್ವ ಶಿಕ್ಷಣದಲ್ಲಿ ತೇರ್ಗಡೆ ಹೊಂದುವುದು ಸೇರಿದಂತೆ ವಾಹನ ಚಾಲಕರಾಗಿ ಕನಿಷ್ಠ 5ವರ್ಷಗಳ ಸೇವೆಯನ್ನು ಸಲ್ಲಿಸಬೇಕಾಗಿರುತ್ತದೆ. ಆದರೆ, ವಾಹನ ಚಾಲಕ ವೃಂದದಿಂದ ಕಿರಿಯ ಸಹಾಯಕ ವೃಂದಕ್ಕೆ ವೃಂದ ಬದಲಾವಣೆ ಮಾಡಿಕೊಳ್ಳಲು ಯಾವುದೇ ಇಲಾಖಾ ಪರೀಕ್ಷೆಗಳನ್ನು ನಿಗದಿಪಡಿಸಿರುವುದಿಲ್ಲ.

ಪು.ತಿ.ನೋ..2

PS-1578
24/11/17

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ ವಾಹನ ಚಾಲಕ ವೃಂದದಿಂದ ಕಿರಿಯ ಸಹಾಯಕ ವೃಂದಕ್ಕೆ ವೃಂದ ಬದಲಾವಣೆ ಹೊಂದುವ ನೌಕರರಿಗೆ ವೃಂದ ಬದಲಾವಣೆ ಹೊಂದಿದ ದಿನಾಂಕದಿಂದ ಮೂರು ವರ್ಷಗಳೊಳಗಾಗಿ ಹುದ್ದೆಗೆ ನಿಗದಿಪಡಿಸಿದ ಇಲಾಖಾ ಪರೀಕ್ಷೆಗಳನ್ನು ತೇರ್ಗಡೆ ಹೊಂದಲು ಅವಕಾಶ ಕಲ್ಪಿಸಲಾಗಿದೆ.

Gayathri. M.R
28 X 17

(ಗಾಯತ್ರಿ ಎಂ.ಆರ್)
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-1)

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ದಿನಾಂಕ: 28/10/2017ರ ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಿ ಇದರ 200 ಪ್ರತಿಗಳನ್ನು ಒದಗಿಸಲು.

ಇವರಿಗೆ:

1. ಪ್ರಧಾನ ಮಹಾಲೇಖಪಾಲರು, (ಜಿ&ಎಸ್ಎಸ್ಎ), (ಇ&ಆರ್ಎಸ್ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು
2. ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಬೆಂಗಳೂರು.
3. ಸರ್ಕಾರದ ಮುಖ್ಯ ಕಾರ್ಯದರ್ಶಿಯವರು
4. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಯವರು
5. ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಯವರು
6. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು
7. ರಾಜ್ಯಪಾಲರ ವಿಶೇಷ ಕಾರ್ಯದರ್ಶಿಯವರು
8. ನಿವಾಸಿ ಆಯುಕ್ತರು, ಕರ್ನಾಟಕ ಭವನ, ಕೌಟಿಲ್ಯಮಾರ್ಗ, ಚಾಣಕ್ಯಪುರಿ, ನವದೆಹಲಿ-110021
9. *ಕಾರ್ಯದರ್ಶಿ, ಕರ್ನಾಟಕ ವಿಧಾನಸಭೆ / ಪರಿಷತ್ತು, ಬೆಂಗಳೂರು
10. *ಮಹಾನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು
11. *ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು
12. *ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು
13. *ನಿಬಂಧಕರು, ಕರ್ನಾಟಕ ಆಡಳಿತ ನ್ಯಾಯ ಮಂಡಳಿ, 6 ಮತ್ತು 7ನೇ ಮಹಡಿ, ಕಂದಾಯಭವನ, ಕೆ.ಜಿ.ರಸ್ತೆ, ಬೆಂಗಳೂರು- 560 009.
14. *ನಿಬಂಧಕರು, ಕರ್ನಾಟಕ ಮೇಲ್ಮನವಿ ನ್ಯಾಯಾಧೀಕರಣ, ಬಹುಮಹಡಿ ಕಟ್ಟಡ, ಬೆಂಗಳೂರು
15. ಪೋಲೀಸ್ ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ನೃಪತುಂಗ ರಸ್ತೆ, ಬೆಂಗಳೂರು
16. ಎಲ್ಲಾ ಇಲಾಖಾ ಮುಖ್ಯಸ್ಥರು
17. ಎಲ್ಲಾ ಪ್ರಾದೇಶಿಕ ಆಯುಕ್ತರು / ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು / ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್ / ಎಲ್ಲಾ ಜಿಲ್ಲಾ ಪೋಲೀಸ್ ವರಿಷ್ಠಾಧಿಕಾರಿಗಳು
18. ಸರ್ಕಾರದ ಎಲ್ಲಾ ವಿಶೇಷ / ಅಪರ / ಜಂಟಿ / ಉಪ / ಅಧೀನ ಕಾರ್ಯದರ್ಶಿಗಳು
19. ಕರ್ನಾಟಕ ಸರ್ಕಾರ ಸಚಿವಾಲಯದ ಎಲ್ಲಾ ಶಾಖೆಗಳು
20. ಶಾಖಾ ರಕ್ಷಾ ಕಡತ / ಅಧಿಕ ಪ್ರತಿಗಳು (* ಮುಖ ಪತ್ರದೊಂದಿಗೆ)